ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 7/12/20

# ಕಲಾಪ ಸಿದ್ಧತೆ ಪರಿಶೀಲಿಸಿದ ಸ್ಪೀಕರ್

ಬೆಂಗಳೂರು: ರಾಜ್ಯ ವಿಧಾನಮಂಡಲದ ಅಧಿವೇಶನ ಸೋಮವಾರ ಆರಂಭವಾಗಲಿದ್ದು, ಅಧಿವೇಶನದ ಪೂರ್ವ ಸಿದ್ಧತೆಯ ಬಗ್ಗೆ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ವೀಕ್ಷಣೆ ಮಾಡಿದರು. ಡಿ.7ರಿಂದ 15ರವರೆಗೆ ಅಧಿವೇಶನ ನಡೆಯಲಿದ್ದು, ಈ ಬಾರಿಯೂ ಕರೋನಾ ಸೋಂಕು ಹರಡುವ ಹಿನ್ನೆಲೆಯಲ್ಲಿ ಅಸೆಂಬ್ಲಿ ಹಾಲ್‌ಗೆ ಶಾಸಕರನ್ನು ಹೊರತುಪಡಿಸಿ ಬೇರೆಯವರಿಗೆ ಒಳಗೆ ಪ್ರವೇಶಿಸಲು ನಿರ್ಬಂಧ ಹೇರಲಾಗಿದೆ. ಶಾಸಕರ ನಡುವೆ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಶಾಸಕರ ಆಸನಗಳ ನಡುವೆ ಫೈಬರ್ ವಿಭಜಕಗಳನ್ನು ಅಳವಡಿಸಲು ಸೂಚಿಸಲಾಗಿದೆ. ಶಾಸಕರು ವಿಧಾನಸಭಾ ಕಲಾಪ ಪ್ರವೇಶಿಸುವ ಮೊದಲು ಕಡ್ಡಾಯವಾಗಿ ಸ್ಯಾನಿಟೈಸರ್ ಹಾಗೂ ಥರ್ಮಲ್ ಸ್ಕ್ಯಾನಿಂಗ್ ಮಾಡಿಸಲಾಗುತ್ತಿದೆ.



ಅಧಿವೇಶನದಲ್ಲಿ ಶಾಸಕರ ಆಪ್ತ ಸಹಾಯಕರು ಹಾಗೂ ಗನ್‌ಮ್ಯಾನ್‌ಗಳಿಗೆ ವಿಧಾನಸೌಧದ ಕೆಳಗೆ ಹಾಲ್‌ನಲ್ಲಿ ಕುಳಿತುಕೊಳ್ಳಲು ವ್ಯವಸ್ಥೆ ಮಾಡಲಾಗಿದೆ.